Akashvani : Bangalore
National Bulletin In Kannada
21.12.2024 : 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
21.12.2024 : 7.35AM
******

ಮುಖ್ಯಾಂಶಗಳು :

1. ಕುವೈತ್‌ಗೆ ಇಂದಿನಿಂದ ಎರಡು ದಿನಗಳ ಪ್ರವಾಸ ಕೈಗೊಳ್ಳಲಿರುವ ಪ್ರಧಾನಿ ನರೇಂದ್ರ ಮೋದಿ; ಭಾರತೀಯ ಸಮುದಾಯದೊಂದಿಗೆ ಸಂವಾದ
2. ೨೦೨೫ರ ಸಾಲಿನ ಬೆಳೆಗಳ ಕನಿಷ್ಠ ಬೆಂಬಲ ಬೆಲೆಗೆ ಆರ್ಥಿಕ ವ್ಯವಹಾರಗಳ ಸಂಪುಟ ಸಮಿತಿ ಅನುಮೋದನೆ
3. ರಾಜಸ್ಥಾನದ ಜೈಸಲ್ಮೇರ್‌ನಲ್ಲಿ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅಧ್ಯಕ್ಷತೆಯಲ್ಲಿ ಬಜೆಟ್ ಪೂರ್ವ ಸಮಾಲೋಚನೆ
4. ೧೯ ವರ್ಷದೊಳಗಿನವರ ಮಹಿಳಾ ಟಿ-೨೦ ಏಷ್ಯಾ ಕಪ್; ಫೈನಲ್‌ನಲ್ಲಿ ನಾಳೆ ಭಾರತ-ಬಾಂಗ್ಲಾದೇಶ ಮುಖಾಮುಖಿ

*********

ಕುವೈತ್‌ನ ಅಧ್ಯಕ್ಷ ಶೇಖ್ ಮೆಷಾಲ್ ಅಲ್ ಅಹ್ಮದ್ ಅಲ್ ಜಮೇರ್ ಅಲ್ ಸಬಾಹ್ ಅವರ ಆಹ್ವಾನದ ಮೇರೆಗೆ ಪ್ರಧಾನಿ ನರೇಂದ್ರ ಮೋದಿ ಅವರು ಇಂದಿನಿಂದ ಎರಡು ದಿನಗಳ ಕುವೈತ್ ಪ್ರವಾಸ ಕೈಗೊಳ್ಳಲಿದ್ದಾರೆ. ತಮ್ಮ ಭೇಟಿಯ ವೇಳೆ ಅವರು, ಕುವೈತ್ ನಾಯಕರೊಂದಿಗೆ ವಿವಿಧ ವಿಷಯಗಳ ಕುರಿತು ಸಮಾಲೋಚಿಸುವ ನಿರೀಕ್ಷೆ ಇದೆ. ಇಂದು ಪ್ರಧಾನಿ, ಅಲ್ಲಿನ ಭಾರತೀಯ ಸಮುದಾಯದೊಂದಿಗೆ ಸಂವಾದ ನಡೆಸಲಿದ್ದಾರೆ. ಹಾಗೆಯೇ ೨೬ನೇ ಅರೆಬಿಯನ್ ಗಾಲ್ಫ್ ಕಪ್‌ನ ಉದ್ಘಾಟನಾ ಸಮಾರಂಭದಲ್ಲಿ ವಿಶೇಷ ಅತಿಥಿಯಾಗಿ ಭಾಗವಹಿಸಲಿದ್ದಾರೆ. ನಾಳೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಬಯಾನ್ ಅರಮನೆಯಲ್ಲಿ ಗೌರವರಕ್ಷೆ ನೀಡಿ, ಸ್ವಾಗತಿಸಲಾಗುವುದು. ಬಳಿಕ ಅವರು, ಕುವೈತ್ ಅಧ್ಯಕ್ಷ ಹಾಗೂ ರಾಜಕುಮಾರ ಅವರೊಂದಿಗೆ ಪ್ರತ್ಯೇಕ ಸಭೆಗಳನ್ನು ನಡೆಸಲಿದ್ದಾರೆ. ಇದೇ ವೇಳೆ ಅವರು, ಕುವೈತ್ ಪ್ರಧಾನಿಯೊಂದಿಗೆ ನಿಯೋಗ ಮಟ್ಟದ ಮಾತುಕತೆ ನಡೆಸಲಿದ್ದಾರೆ. ಕಳೆದ ೪೩ ವರ್ಷಗಳಲ್ಲಿ ಭಾರತೀಯ ಪ್ರಧಾನಿಯೊಬ್ಬರು ಕುವೈತ್‌ಗೆ

ಕೈಗೊಳ್ಳುತ್ತಿರುವ ಮೊದಲ ಭೇಟಿ ಇದಾಗಲಿದೆ. ಈ ಭೇಟಿ, ಉಭಯ ರಾಷ್ಟ್ರಗಳ ನಡುವೆ ದ್ವಿಪಕ್ಷೀಯ ಸಂಬಂಧಗಳನ್ನು ಬಲಪಡಿಸುವ ಜತೆಗೆ ಗಲ್ಫ್ ಪ್ರದೇಶದಲ್ಲಿ ಭಾರತದ ಸಂಬಂಧವನ್ನು ವೃದ್ಧಿಸಲಿದೆ.

*********

ಉಪರಾಷ್ಟ್ರಪತಿ ಜಗದೀಪ್ ಧನಕರ್ ಅವರು, ಒಂದು ದಿನದ ಪ್ರವಾಸಕ್ಕಾಗಿ ಚಂಡಿಗಢಕ್ಕೆ ಇಂದು ಭೇಟಿ ನೀಡಲಿದ್ದಾರೆ. ಈ ವೇಳೆ ಅವರು, ಪಂಜಾಬ್ ವಿಶ್ವವಿದ್ಯಾಲಯದ ೫ನೇ ಜಾಗತಿಕ ಹಳೆಯ ವಿದ್ಯಾರ್ಥಿಗಳ ಸಭೆಯನ್ನು ಉದ್ಘಾಟಿಸಲಿದ್ದಾರೆ.

*********

ಕೇಂದ್ರ ಆರ್ಥಿಕ ವ್ಯವಹಾರಗಳ ಸಂಪುಟ ಸಮಿತಿ ೨೦೨೫ರ ಸಾಲಿನ ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆಗಳಿಗೆ ಅನುಮೋದನೆ ನೀಡಿದೆ. ನವದೆಹಲಿಯಲ್ಲಿ ನಿನ್ನೆ ಮಾಧ್ಯಮಗಳಿಗೆ ಮಾಹಿತಿ ನೀಡಿದ ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ರೈತರ ಕಲ್ಯಾಣಕ್ಕಾಗಿ ಕೇಂದ್ರ ಸರ್ಕಾರ ಹಲವು ಕ್ರಮಗಳನ್ನು ಕೈಗೊಂಡಿದೆ. ಪ್ರತಿ ಕ್ವಿಂಟಾಲ್ ಇಡೀ ಕೊಬ್ಬರಿಗೆ ೧೨ ಸಾವಿರದ ೧೦೦ ರೂಪಾಯಿ ಹಾಗೂ ಸರಾಸರಿ ಗುಣಮಟ್ಟದ ಮಿಲ್ಲಿಂಗ್ ಕೊಬ್ಬರಿಗೆ ೧೧ ಸಾವಿರದ ೫೮೨ ಕನಿಷ್ಠ ಬೆಂಬಲ ಬೆಲೆ ನಿಗದಿಪಡಿಸಲಾಗಿದೆ ಎಂದರು. ಮಿಲ್ಲಿಂಗ್ ಕೊಬ್ಬರಿಗೆ ನಿಗದಿಪಡಿಸಿರುವ ಬೆಂಬಲ ಬೆಲೆ ೨೦೨೪ನೇ ಸಾಲಿಗೆ ಹೋಲಿಸಿದರೆ ೪೨೨ ರೂಪಾಯಿ ಏರಿಸಲಾಗಿದ್ದು, ಇಡೀ ಕೊಬ್ಬರಿಗೆ ೧೦೦ ರೂಪಾಯಿ ಏರಿಕೆ ಮಾಡಲಾಗಿದೆ. ಈ ನಿರ್ಧಾರಗಳು ಎನ್‌ಡಿಎ ಸರ್ಕಾರದ ರೈತರ ಜೀವನ ಉತ್ತಮಗೊಳಿಸುವ ಕುರಿತ ಬದ್ಧತೆಯ ಪ್ರತಿಬಿಂಬವಾಗಿವೆ ಎಂದು ಸಚಿವರು ಮಾಹಿತಿ ನೀಡಿದರು.

*********

ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ಅವರು ನಿನ್ನೆ ಸಂಜೆ ರಾಜಸ್ಥಾನದ ಜೈಸಲ್ಮೇರ್‌ನಲ್ಲಿ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಹಣಕಾಸು ಸಚಿವರೊಂದಿಗೆ ಬಜೆಟ್ ಪೂರ್ವ ಸಮಾಲೋಚನಾ ಸಭೆಯ ಅಧ್ಯಕ್ಷತೆ ವಹಿಸಿದ್ದರು. ೨೦೨೫-೨೬ ರ ಹಣಕಾಸು ವರ್ಷದ ಕೇಂದ್ರ ಆಯವ್ಯಯ ಕುರಿತು ಕೇಂದ್ರ ಹಣಕಾಸು ಸಚಿವರಿಗೆ ಸಭೆಯಲ್ಲಿ ಸಲಹೆಗಳನ್ನು ನೀಡಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ನಿರ್ಮಲಾ ಸೀತಾರಾಮನ್, ಆರೋಗ್ಯಕರ ಸ್ಥೂಲ ಆರ್ಥಿಕ ವಾತಾವರಣ, ತೆರಿಗೆ ಸಂಗ್ರಹಣೆಯಲ್ಲಿನ ದಕ್ಷತೆಯಿಂದಾಗಿ, ೧೫ ನೇ ಹಣಕಾಸು ಆಯೋಗದ ಅಡಿಯಲ್ಲಿ ಕಳೆದ ೪೫ ತಿಂಗಳುಗಳಲ್ಲಿ

ರಾಜ್ಯಗಳಿಗೆ ೧೪ ನೇ ಹಣಕಾಸು ಆಯೋಗದ ಅಡಿಯಲ್ಲಿ ೬೦ ತಿಂಗಳುಗಳಲ್ಲಿ ವಿತರಿಸಿದ ಅನುದಾನಕ್ಕಿಂತ ಹೆಚ್ಚಿನ ಅನುದಾನಗಳನ್ನು ವಿತರಿಸಲಾಗಿದೆ ಎಂದರು. ಎಸ್‌ಎಎಸ್‌ಸಿಐ-೨೦೨೪-೨೫ರ ಅಡಿಯಲ್ಲಿ ಕೇಂದ್ರ ಸರ್ಕಾರ ಸುಮಾರು ೩೦ ಸಾವಿರ ಕೋಟಿ ರೂಪಾಯಿಗಳನ್ನು 'ಅನ್ಟೈಡ್ ಫಂಡ್ಸ್' ಆಗಿ ನಿಗದಿಪಡಿಸಿದೆ. ಬಂಡವಾಳ ಸ್ವತ್ತುಗಳ ರಚನೆಯ ಮೇಲಿನ ವೆಚ್ಚವನ್ನು ಇನ್ನಷ್ಟು ಹೆಚ್ಚಿಸಲು ರಾಜ್ಯ ಸರ್ಕಾರಗಳು ಯಾವುದೇ ವಲಯದಲ್ಲಿ ಅನುದಾನವನ್ನು ಬಳಸಬಹುದು ಎಂದರು.

ಇಂದು ಸಚಿವೆ ನಿರ್ಮಲಾ ಸೀತಾರಾಮನ್ ಅವರು, ಜೈಸಲ್ಮೇರ್‌ನಲ್ಲಿ ೫೫ನೇ ಜಿಎಸ್‌ಟಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಸಭೆಯಲ್ಲಿ ಸರಕು ಮತ್ತು ಸೇವಾ ತೆರಿಗೆ ಸಂಬಂಧಿಸಿದ ವಿವಿಧ ಸಮಸ್ಯೆಗಳ ಕುರಿತು ಸಮಾಲೋಚನೆ ನಡೆಯಲಿದೆ.

*********

ಈ ಬಾರಿ ಸಂಸತ್ತಿನ ಚಳಿಗಾಲದ ಅಧಿವೇಶನದಲ್ಲಿ ಲೋಕಸಭೆಯಲ್ಲಿ ೨೦ ಬಾರಿ ಹಾಗೂ ರಾಜ್ಯಸಭೆಯಲ್ಲಿ ೨೯ ಬಾರಿ ಕಲಾಪ ಕೈಗೊಳ್ಳಲಾಯಿತು ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಹೇಳಿದ್ದಾರೆ.ನವದೆಹಲಿಯಲ್ಲಿ ನಿನ್ನೆ ಅಧಿವೇಶನದ ಮುಕ್ತಾಯದ ನಂತರ ಮಾಧ್ಯಮಗಳಿಗೆ ಮಾಹಿತಿ ನೀಡಿದ ಅವರು, ಲೋಕಸಭೆಯಲ್ಲಿ ಮಂಡಿಸಲಾದ ೫ ಮಸೂದೆಗಳಲ್ಲಿ ನಾಲ್ಕು ಮಸೂದೆಗಳಿಗೆ ಅನುಮೋದನೆ ದೊರೆತಿದೆ. ಹಾಗೆಯೇ ರಾಜ್ಯಸಭೆಯಿಂದ ಮೂರು ಮಸೂದೆಗಳಿಗೆ ಅನುಮೋದನೆ ದೊರೆತಿದೆ ಎಂದರು.ಲೋಕಸಭೆ ಶೇಕಡ ೫೪ರಷ್ಟು ಉತ್ಪಾದಕತೆಯನ್ನು ದಾಖಲಿಸಿದರೆ, ರಾಜ್ಯಸಭೆಯು ಶೇಕಡ ೪೦ರಷ್ಟು ಉತ್ಪಾದಕತೆಯನ್ನು ದಾಖಲಿಸಿದೆ. ಉಭಯ ಸದನಗಳ ಉತ್ಪಾದಕತೆ ತಗ್ಗಿದೆ ಮತ್ತು ಪ್ರತಿಯೊಬ್ಬರೂ ಅದರ ಬಗ್ಗೆ ಯೋಚಿಸಬೇಕು. ವಿರೋಧ ಪಕ್ಷದ ಸಂಸದರು ಸೃಷ್ಟಿಸಿದ ಕೋಲಾಹಲಗಳಿಂದ ಉಭಯ ಸದನಗಳ ಮೇಲೆ ಪರಿಣಾಮ ಬೀರಿದೆ ಎಂದರು.ಲೋಕಸಭೆಯಲ್ಲಿ ಸುಮಾರು ೧೫ ಗಂಟೆಗೂ ಹೆಚ್ಚು ಕಾಲ ಚರ್ಚೆ ನಡೆಯಿತು. ಅದರಲ್ಲಿ ೬೨ ಸದಸ್ಯರು ಭಾಗವಹಿಸಿದ್ದರು ಮತ್ತು ಪ್ರಧಾನಿ ನರೇಂದ್ರ ಮೋದಿ ಉತ್ತರಿಸಿದರು. ರಾಜ್ಯಸಭೆಯಲ್ಲಿ ೮೦ ಸದಸ್ಯರು ಕಲಾಪದಲ್ಲಿ ೧೭ ಗಂಟೆಗಳ ಕಾಲ ಸದನದಲ್ಲಿ ತೊಡಗಿಸಿಕೊಂಡರು ಎಂದು ಮಾಹಿತಿ ನೀಡಿದರು.

*********

’ಒಂದು ರಾಷ್ಟ್ರ - ಒಂದು ಚುನಾವಣೆ’ಗೆ ಸಂಬಂಧಿಸಿದ ಎರಡು ವಿಧೇಯಕಗಳನ್ನು ಸಂಸತ್ತಿನ ಜಂಟಿ ಪರಿಶೀಲನಾ ಸಮಿತಿಗೆ ಒಪ್ಪಿಸಲಾಗಿದ್ದು, ಈ ಸಮಿತಿಗೆ ಬಿಜೆಪಿ ಸಂಸದ ಪಿ.ಪಿ. ಚೌಧರಿ ಅವರನ್ನು ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ. ಸಮಿತಿಯಲ್ಲಿ ೨೭ ಮಂದಿ ಲೋಕಸಭೆ ಮತ್ತು ೧೨ ಮಂದಿ ರಾಜ್ಯಸಭಾ ಸದಸ್ಯರಿದ್ದಾರೆ. ನಿನ್ನೆ ಸದನ ಸಮಾವೇಶಗೊಳ್ಳುತ್ತಿದ್ದಂತೆ ಕೇಂದ್ರ ಕಾನೂನು ಸಚಿವ ಅರ್ಜುನ್ ರಾಮ್ ಮೇಘ್ವಾಲ್ ಅವರು ಸಂವಿಧಾನದ ೧೨೫ನೇ ತಿದ್ದುಪಡಿ ಮಸೂದೆ -೨೦೨೪ ಮತ್ತು ಕೇಂದ್ರಾಡಳಿತ ಪ್ರದೇಶಗಳ ಕಾನೂನು ತಿದ್ದುಪಡಿ ಮಸೂದೆ -೨೦೨೪ ಅನ್ನು ಮಂಡಿಸಿದರು. ನಂತರ ಮಸೂದೆಗಳನ್ನು ಸಂಸತ್ತಿನ ಜಂಟಿ ಪರಿಶೀಲನಾ ಸಮಿತಿಗೆ ಒಳಪಡಿಸಲಾಯಿತು. ಸಮಿತಿ ಮುಂದಿನ ಸಂಸತ್ ಅಧಿವೇಶನದ ಮೊದಲ ದಿನದ ವೇಳೆಗೆ ತನ್ನ ವರದಿ ಸಲ್ಲಿಸಲಿದೆ. ಸಮಿತಿಯಲ್ಲಿ ಬಿಜೆಪಿಯ ಅರುಣ್ ಸಿಂಗ್ ಠಾಕೂರ್ ಮತ್ತು ಪರಷೋತ್ತಮ್ ರೂಪಾಲ, ಕಾಂಗ್ರೆಸ್ ನ ಪ್ರಿಯಾಂಕ ಗಾಂಧಿ, ಮನೀಶ್ ತಿವಾರಿ, ಟಿಎಂಸಿಯ ಕಲ್ಯಾಣ್ ಬ್ಯಾನರ್ಜಿ, ಎನ್.ಸಿ.ಪಿಯ ಸುಪ್ರಿಯ ಸುಳೆ ಮತ್ತಿತರೆ ಲೋಕಸಭಾ ಸದಸ್ಯರು ಸಮಿತಿಯ ಸದಸ್ಯರಾಗಿದ್ದಾರೆ.

*********

೨೦೨೫ ರ ಜನವರಿ ಎರಡನೇ ವಾರದಲ್ಲಿ ಬೆಂಗಳೂರಿನಲ್ಲಿ ಅಮೆರಿಕ ರಾಯಭಾರಿ ಕಚೇರಿ ಸ್ಥಾಪನೆಯಾಗಲಿದೆ. ಭಾರತದಲ್ಲಿನ ಅಮೆರಿಕ ರಾಯಭಾರಿ ಎರಿಕ್ ಗಾರ್ಸೆಟ್ಟಿ ಈ ವಿಷಯ ಪ್ರಕಟಿಸಿರುವ ಬಗ್ಗೆ ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ ಮಾಹಿತಿ ನೀಡಿದ್ದಾರೆ. ೨೦೧೯ರಲ್ಲಿ ಬೆಂಗಳೂರಿನಲ್ಲಿ ರಾಯಭಾರ ಕಚೇರಿ ತೆರೆಯುವಂತೆ ವಿದೇಶಾಂಗ ಸಚಿವ ಡಾ ಎಸ್. ಜೈಶಂಕರ್ ಅವರನ್ನು ತೇಜಸ್ವಿ ಸೂರ್ಯ ಒತ್ತಾಯಿಸಿದ್ದರು. ಬೆಂಗಳೂರು ಭಾರತದ ಐಟಿ ಆದಾಯದ ಶೇಕಡ ೪೦ರಷ್ಟು ಕೊಡುಗೆ ನೀಡುತ್ತಿದ್ದು, ಅಮೆರಿಕಾ ವೀಸಾ-ಸಂಬಂಧಿತ ಸೇವೆಗಳಿಗಾಗಿ ಚೆನ್ನೈ ಅಥವಾ ಹೈದರಾಬಾದ್‌ಗೆ ತೆರಳಬೇಕಿತ್ತು. ೨೦೨೩ ರಲ್ಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ಅಮೆರಿಕ ಭೇಟಿ ಸಂದರ್ಭದಲ್ಲಿ ಬೆಂಗಳೂರಿನಲ್ಲಿ ದೂತಾವಾಸ ಕಚೇರಿ ತೆರೆಯುವ ಬಗ್ಗೆ ಘೋಷಿಸಲಾಗಿತ್ತು.

*********

೮ನೇ ಆವೃತ್ತಿಯ ಪರೀಕ್ಷಾ ಪೆ ಚರ್ಚಾ ಮುಂದಿನ ತಿಂಗಳು ನಡೆಯಲಿದ್ದು, ಪ್ರಧಾನಿ ನರೇಂದ್ರ ಮೋದಿ ಅವರ ವಿಶಿಷ್ಟ ಸಂವಾದಾತ್ಮಕ ಕಾರ್ಯಕ್ರಮದ ನೋಂದಣಿ ಈಗಾಗಲೇ ಪ್ರಾರಂಭವಾಗಿದೆ. ಒಥಿಉov ಪೋರ್ಟಲ್‌ನಲ್ಲಿ ಜನವರಿ ೧೪ ರವರೆಗೆ ನೋಂದಣಿಗೆ ಅವಕಾಶವಿದೆ. ಈ

ಕಾರ್ಯಕ್ರಮವು ಪರೀಕ್ಷೆಯ ಒತ್ತಡವನ್ನು ಕಡಿಮೆ ಮಾಡಲು ಮತ್ತು ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಪೋಷಕರು ಪರೀಕ್ಷೆಯನ್ನು ಉತ್ಸವವಾಗಿ ಆಚರಿಸಲು ಪ್ರೋತ್ಸಾಹಿಸುವ ಪರಿಕಲ್ಪನೆಯಾಗಿದೆ. ೬ ರಿಂದ ೧೨ ನೇ ತರಗತಿಯ ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಪೋಷಕರಿಗೆ ಒಅಕಿ ಮಾದರಿಯಲ್ಲಿ ರಸಪ್ರಶ್ನೆ ಸ್ಪರ್ಧೆಯನ್ನು ಅಭಿವೃದ್ಧಿಪಡಿಸಲಾಗಿದೆ ಎಂದು ಶಿಕ್ಷಣ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ.

*********

ಪ್ರಧಾನಿ ನರೇಂದ್ರ ಮೋದಿ ಅವರು, ಇದೇ ೨೯ ರಂದು ಆಕಾಶವಾಣಿಯಲ್ಲಿ ಪ್ರತಿ ತಿಂಗಳು ಪ್ರಸಾರವಾಗುವ ತಮ್ಮ ಜನಪ್ರಿಯ 'ಮನ್ ಕಿ ಬಾತ್" ಕಾರ್ಯಕ್ರಮದಲ್ಲಿ ದೇಶ ಮತ್ತು ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ಮಾತನಾಡಲಿದ್ದಾರೆ.

*********

ಮಲೇಷ್ಯಾದ ಕೌಲಾಲಂಪುರದಲ್ಲಿ ನಾಳೆ ನಡೆಯಲಿರುವ ೧೯ ವರ್ಷದೊಳಗಿನವರ ಮಹಿಳಾ ಟಿ-೨೦ ಏಷ್ಯಾ ಕಪ್ ಕ್ರಿಕೆಟ್ ಟೂರ್ನಿಯ ಫೈನಲ್ ಪಂದ್ಯದಲ್ಲಿ ಭಾರತ-ಬಾಂಗ್ಲಾದೇಶ ತಂಡಗಳು ಮುಖಾಮುಖಿಯಾಗಲಿವೆ. ಈ ಪಂದ್ಯ ಭಾರತೀಯ ಕಾಲಮಾನ ಬೆಳಗ್ಗೆ ೭ ಗಂಟೆಗೆ ನಡೆಯಲಿದೆ. ನಿನ್ನೆ ನಡೆದ ಸೂಪರ್-೪ ಪಂದ್ಯದಲ್ಲಿ ಭಾರತ, ೪ ವಿಕೆಟ್‌ಗಳಿಂದ ಶ್ರೀಲಂಕಾವನ್ನು ಮಣಿಸಿ, ಫೈನಲ್ ಪ್ರವೇಶಿಸಿದರೆ, ಬಾಂಗ್ಲಾದೇಶ ತಂಡ, ನೇಪಾಳ ತಂಡವನ್ನು ಮಣಿಸಿ, ಫೈನಲ್‌ಗೆ ಲಗ್ಗೆ ಇಟ್ಟಿದೆ.

*********

ಭಾರತ್ ರಾಷ್ಟ್ರ ಸಮಿತಿ - ಬಿಆರ್‌ಎಸ್ ಪಕ್ಷದ ಕಾರ್ಯನಿರತ ಅಧ್ಯಕ್ಷ ಕೆ.ಟಿ. ರಾಮರಾವ್ ಅವರನ್ನು ಇದೇ ೩೦ರ ವರೆಗೆ ಬಂಧಿಸದಂತೆ ಭ್ರಷ್ಟಾಚಾರ ನಿಗ್ರಹ ದಳಕ್ಕೆ ತೆಲಂಗಾಣ ಉಚ್ಚ ನ್ಯಾಯಾಲಯ ಆದೇಶಿಸಿದೆ. ಕಳೆದ ವರ್ಷ ಬಿಆರ್‌ಎಸ್ ಅಧಿಕಾರದಲ್ಲಿದ್ದಾಗ, ಸರ್ಕಾರಿ ಹಣವನ್ನು ಹೈದರಾಬಾದ್‌ನಲ್ಲಿ ಫಾರ್ಮುಲಾ ಇ-ರೇಸ್ ಆಯೋಜಿಸಲು ಬಳಸಿದ ಆರೋಪದ ಮೇಲೆ ರಾಮರಾವ್ ಅವರ ವಿರುದ್ಧ ಭ್ರಷ್ಟಾಚಾರ ನಿಗ್ರಹ ದಳ ಪ್ರಕರಣ ದಾಖಲಿಸಿತ್ತು. ಬಂಧನಕ್ಕೆ ನಿರ್ಬಂಧ ಹೇರಿದ್ದರೂ, ವಿಚಾರಣೆ ಮುಂದುವರಿಸಲು ಅವಕಾಶ ನೀಡಿರುವ ನ್ಯಾಯಾಲಯ ಇದೇ ೨೩ರೊಳಗೆ ಇದಕ್ಕೆ ಪ್ರತ್ಯುತ್ತರ ನೀಡುವಂತೆ ಸರ್ಕಾರಕ್ಕೆ ನಿರ್ದೇಶಿಸಿದೆ.